(14)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಅ.ಅ/ಯ.ವ/ತಾಂ.ಮ/100 /2014-15

ಅಧೀಕ್ಷಕ ಅಭಿಯಂತರವರ ಕಛೇರಿ
ಯಲಹಂಕ ವಲಯ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 29-10-2014

ತಾಂತ್ರಿಕ ಮಂಜೂರಾತಿ

ವಿಷಯ:- Improvements to Roads and Drains at Mestripalya in Ward No.06 Byatarayanapura Sub Division.

ಉಲ್ಲೇಖ:- ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ:

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ ವಿಭಾಗ) ರವರು **2014-15ನೇ** ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು "ಪಿ.1771 POW-2014-15" ಕೈಗೊಳ್ಳಲು **ರೂ. 20.00 ಲಕ್ಷಗಳಿಗೆ** ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (2) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (3) ರಂತೆ ಮುಖ್ಯ ಅಭಿಯಂತರರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2014ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 21 ಕ್ರ.ಸಂ 100 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.

ಅಧೀಕ್ಷಕ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ, ಬೆಂಗಳೂರು-92.

ಪ್ರತಿಯನ್ನು:

1. ಮಾನ್ಯ ಅಪರ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.